ಶಾಖೆ / ವಿಷಯ: DEPARTMENT / SUBJECT: ಶಿಕ್ಷಣ

ಪತ್ರಿಕೆಯ ಹೆಸರು : NAME OF THE NEWS PAPER : ವಿಜಯವಾಣಿ

ದಿನಾಂಕ : DATE : 05/05/2019

### ವೇತನ ಬಿಡುಗಡೆಗೆ ಸರ್ಕಾರ ಅನುಮೋದನೆ | ವಾರದಲ್ಲಿ ಕೈ ಸೇರಲಿದೆ ಹಣ

# ಆದರ್ಶ ಶಿಕ್ಷಕರಿಗೆ ವೇತನ ಭಾಗ್ಯ

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು

**» ₹553 ಕೋಟಿ ಬಿಡುಗಡೆಗೆ ಆದೇಶ**

ಕಳೆದ ಎರಡು ತಿಂಗಳಿನಿಂದ ಸಂಬಳವಿಲ್ಲದೆ ಕಂಗಾಲಾಗಿದ್ದ ಸರ್ವ ಶಿಕ್ಷಣ ಅಭಿಯಾನ, ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ ಮತ್ತು ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನದ ಆದರ್ಶ ವಿದ್ಯಾಲಯಗಳ ಶಿಕ್ಷಕರು ಕೊನೆಗೂ ನಿಟ್ಟುಸಿರುಬಿಟ್ಟಿದ್ದಾರೆ. ಇವರ ಬಾಕಿ ವೇತನ ಪಾವತಿಯ 1ನೇ ತ್ರೈಮಾಸಿಕ ಅನುದಾನವನ್ನು ರಾಜ್ಯ ಸರ್ಕಾರ ಬಿಡುಗಡೆ ಮಾಡಿದೆ.

ಸರ್ವ ಶಿಕ್ಷಣ ಅಭಿಯಾನ ಶಿಕ್ಷಕರು ವೇತನಕ್ಕಾಗಿ ಪರದಾಟ ನಡೆಸುತ್ತಿರುವ ಕುರಿತು 'ವಿಜಯವಾಣಿ' ಮೇ 3ರಂದು 'ಎಸ್‌ಎಸ್‌ಎ ಶಿಕ್ಷಕರಿಗಿಲ್ಲ


ಎಸ್‌ಎಸ್‌ಎ ಶಿಕ್ಷಕರಿಗಿಲ್ಲ ಸಂಬಳ
ವೇತನದ ಜವಾಬ್ದಾರಿಯನ್ನು ಸರ್ಕಾರ ಹೊರುತ್ತಿಲ್ಲ | ಶಾಶ್ವತ ಪರಿಹಾರ ಇಲ್ಲವೇ ಇಲ್ಲ

**ವಿಜಯವಾಣಿ ವರದಿ ಪರಿಣಾಮ**

ಸಂಬಳ' ಶೀರ್ಷಿಕೆಯಡಿ ಪ್ರಕಟಿಸಿದ್ದ ವಿಶೇಷ ವರದಿ ಶಿಕ್ಷಣ ಇಲಾಖೆಯ ಕಣ್ತೆರೆಸಿದೆ.

ಆರ್ಥಿಕ ಇಲಾಖೆಯಿಂದ ಅನುಮೋದನೆಗೊಂಡ ತರುವಾಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ ಕಾರ್ಯದರ್ಶಿ ಎಸ್.ಆರ್. ಉಮಾಶಂಕರ್ ಕೇಂದ್ರದ ಅನುದಾನ ನಿರೀಕ್ಷಿಸಿ 553 ಕೋಟಿ ರೂ. ಬಿಡುಗಡೆ ಮಾಡಲು ಆದೇಶಿಸಿದ್ದಾರೆ. ಈ ಮೊತ್ತವನ್ನು ಜಿಲ್ಲೆ/ ತಾಲೂಕುವಾರು ಹಂಚಿಕೆ ಮಾಡಿ ನಿಯಮಾನುಸಾರ ಮರು ಬಿಡುಗಡೆ ಮಾಡಬೇಕು ಮತ್ತು ಖಜಾನೆಯಲ್ಲಿ ಅಪ್ಲೋಡ್ ಮಾಡಬೇಕು ಎಂದು ಸಮಗ್ರ ಶಿಕ್ಷಣ ಯೋಜನೆಯ ರಾಜ್ಯ ಯೋಜನಾ ನಿರ್ದೇಶಕರಿಗೆ ಸೂಚಿಸಿದ್ದಾರೆ.

ಶಿಕ್ಷಣ ಇಲಾಖೆ ತಮ್ಮ ಬೇಡಿಕೆಗೆ ತುರ್ತಾಗಿ ಸ್ಪಂದಿಸಿದೆ. ಶಿಕ್ಷಕರ ಸಂಕಷ್ಟ ಅರಿತು ಕೇಂದ್ರದ ಅನುದಾನ ನಿರೀಕ್ಷಿಸಿ ಅನುದಾನ ಬಿಡುಗಡೆ ಮಾಡಿದೆ ಎಂದು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಪ್ರಧಾನ ಕಾರ್ಯದರ್ಶಿ ಚಂದ್ರಶೇಖರ ನುಗ್ಗಿ ಹರ್ಷ ವ್ಯಕ್ತಪಡಿಸಿದ್ದಾರೆ. ಇನ್ನೊಂದು ವಾರದಲ್ಲಿ ಶಿಕ್ಷಕರಿಗೆ ಎರಡು ತಿಂಗಳ ಬಾಕಿ ವೇತನ ಪಾವತಿಯಾಗಲಿದೆ ಎಂದು ಅವರು ಹೇಳಿದ್ದಾರೆ.